**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು.**

**ಸಿಸಿ ಸಂಖ್ಯೆ : 12/2026**

ಪಿರ್ಯಾದುದಾರರು ಃ ಕವಲಂದೆ ಪೊಲೀಸ್ ಠಾಣೆ, ನಂಜನಗೂಡು

ವಿರುದ್ಧ

ಆರೋಪಿಗಳು

| |
|---|
| ನಾಗರಾಜು ಬಿನ್ ಲೇಟ್ ಶಿವಾಜಿ 23 ವರ್ಷ<br>ವಾಸಃಮಹದೇವನಗರ ಗ್ರಾಮ, ನಂಜನಗೂಡು ತಾಲ್ಲೂಕು |

*** *** ***

ಆಪಾದನೆ

ಶ್ರೀಮತಿ.ಸರಿತ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., ಪ್ರಭಾರ 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ:-

ದಿನಾಂಕ:26.05.2026 ರಂದು ಮಧ್ಯಾಹ್ನ 12:00 ಗಂಟೆಯಲ್ಲಿ ನಂಜನಗೂಡು ತಾಲ್ಲೂಕು ಕವಲಂದೆ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಕಾರ್ಯ ಗ್ರಾಮದಿಂದ ಹನುಮನಪುರ ಹಾಗೂ ತಗಡೂರು ಗ್ರಾಮಗಳಿಗೆ ಹೋಗಿರುವ ಟಾರು ರಸ್ತೆಯ ಎಡ ಭಾಗದಲ್ಲಿ ಚಾಸಾ.1 ಮತ್ತು 2 ರವರು ನಡೆದುಕೊಂಡು ಹೋಗುವಾಗ ಆರೋಪಿತರಾದ ನೀವು ಕೆಎ-05-ಎಲ್ ಎಫ್-5702 ಹೀರೋ ಸ್ಪ್ಲೆಂಡರ್ ಬೈಕನ್ನು ಅತಿವೇಗವಾಗಿ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಬಂದು ಚಾಸಾ.2 ರವರ ಎಡಗಾಲಿಗೆ ಗುದ್ದಿಸಿ ಅಪಘಾತಪಡಿಸಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.281 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಎರಡನೆಯದಾಗಿ , ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಮಾಡಿದ ಸದರಿ ಅಪಘಾತದಿಂದ ಚಾಸಾ.2 ರವರ ಎಡಗಾಲಿಗೆ ತೀವ್ರ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.125(ಬಿ) ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಮೂರನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ, ಆರೋಪಿತರಾದ ನೀವು ಸದರಿ ಅಪಘಾತದ ನಂತರ ವಾಹನವನ್ನು ನಿಲ್ಲಿಸದೆ, ಗಾಯಾಳುವಿಗೆ ಚಿಕಿತ್ಸೆಯನ್ನು ಕೊಡಿಸದೆ ಹಾಗೂ ಅಪಘಾತದ ಮಾಹಿತಿಯನ್ನು ಮಾಹಿತಿಯನ್ನು ಪೊಲೀಸರಿಗೆ ನೀಡಿದೆ ಹೊರಟುಹೋದ ಕಾರಣ ಭಾರತೀಯ ಮೋಟಾರು ಕಾಯಿದೆ ಕಲಂ 187 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಚಾಲನಾ ಪರವಾನಗಿ ಇಲ್ಲದೆ ವಾಹನವನ್ನು ಚಲಾಯಿಸಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ಮೋಟಾರು ವಾಹನಗಳ ಕಾಯಿದೆ ಕಲಂ.3(1) ಸಹವಾಚಕ ಕಲಂ.181 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

**1. ಈಗ ನಿಮಗೆ ಓದಿ ಹೇಳಿದ ನಿಮ್ಮ ಮೇಲಿನ ಆರೋಪ ನಿಮಗೆ ತಿಳಿಯಿತೇ?**

**ಉಃ**

**2. ನಿಮ್ಮ ಮೇಲಿರುವ ಆರೋಪವನ್ನು ಒಪ್ಪಿಕೊಳ್ಳುವಿರಾ? ಅಥವಾ ನಿಮ್ಮ ಪರವಾಗಿ ವಿಚಾರಣೆ ನಡೆಸಲು ಬಯಸುವಿರಾ?**

**ಉಃ**

(ಮೇಲ್ಕಂಡ ಆರೋಪವನ್ನು ಆರೋಪಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 03.06.2026 ರಂದು ತೆಗೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

**1ನೇ ಹೆಚ್ಚುವರಿ** ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ.,
ನಂಜನಗೂಡು.